**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.462/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಬಿ.ಎಮ್. ಅಕ್ರಮ್ | ಪ್ರಾಸಾ-11 |
| ತಂದೆಯ ಹೆಸರು | : ಲೇಟ್ ಮುಕ್ಬರ್ | ಚಾಸಾ-9 |
| ವಯಸ್ಸು | : 32 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಚಾಲಕ | ದಿನಾಂಕಃ 18.07.2025 |
| ವಾಸಸ್ಥಳ | : ಬಣಕಲ್ | |

**:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿಲ್ಲ. ಚಾಸಾ-10 ರವರ ಪರಿಚಯ ನನಗಿಲ್ಲ.

ಸಾಕ್ಷಿಯು ನಿಪಿ-9 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ನಿಪಿ-10 ರಲ್ಲಿ ತಮ್ಮ ಇರುವಿಕೆಯ ಬಗ್ಗೆ ಗುರುತಿಸುತ್ತಾರೆ. ಸದರಿ ನಿಶಾನೆಯಲ್ಲಿ ಕಂಡುಬರುತ್ತಿರುವ ವಾಹನವನ್ನು ಈ ಹಿಂದೆ ನಾನು ನೋಡಿರುವುದಿಲ್ಲ.

ಕಳೆದ 1 ವರ್ಷದ ಹಿಂದೆ ನಾನು ಬಣಕಲ್ ಪೋಲಿಸ್ ಠಾಣೆಯಲ್ಲಿ ನಿಪಿ-9 ಕ್ಕೆ ಸಹಿ ಮಾಡಿರುತ್ತೇನೆ. ಸದರಿ ಸಹಿಯನ್ನು ಯಾವ ವಿಚಾರದ ಕುರಿತು ಮಾಡಿರುತ್ತೇನೆ ಎಂದು ನನಗೆ ತಿಳಿದಿರುವುದಿಲ್ಲ. ಪೋಲಿಸರ ಕೋರಿಕೆಯ ಮೇರೆಗೆ ಸಹಿಯನ್ನು ಮಾಡಿರುತ್ತೇನೆ. ಇದನ್ನು ಹೊರತು ಪಡಿಸಿ ಈ ಪ್ರಕರಣದ ಕುರಿತು ಇತರ ಯಾವುದೆ ವಿಚಾರ ನನಗೆ ತಿಳಿದಿರುವುದಿಲ್ಲ. ನಿಪಿ-10 ನ್ನು ಪೋಲಿಸ್ ಠಾಣೆಯ ಬಳಿ ತೆಗೆಯಲಾಗಿರುತ್ತದೆ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ದಿ.20.01.2024 ರಂದು ಬಣಕಲ್ ಪೋಲಿಸ್ ಠಾಣೆಯಲ್ಲಿ ನಾನು ನಿಪಿ-9 ಕ್ಕೆ ಸಹಿ ಮಾಡುವಾಗ ನ್ಯಾಯಾಲಯದ ಮುಂದೆ ಇರುವ ಆರೋಪಿ ಮತ್ತು ಚಾಸಾ-9 ರವರು ಹಾಜರಿದ್ದರು ಎಂದರೆ ಸರಿಯಲ್ಲ. ಸದರಿ ದಿನ ಒಂದು ಸ್ಕೂಟರ್ ಅನ್ನು ನಿಲ್ಲಿಸಿದ್ದರು ಎಂದರೆ ಸರಿ ಆದರೆ ಸದರಿ ವಾಹನದ ನೊಂದಣಿ ಸಂಖ್ಯೆ KA-18-EK-1536 ಎಂದರೆ ನನಗೆ ನೆನಪಿರುವುದಿಲ್ಲ. ಅದೇ ದಿನ ಎಂ.ಒ.2 ನ್ನು ನಾನು ಕೃತ್ಯಕ್ಕೆ ಬಳಸಿದ್ದೆ ಎಂದು ನ್ಯಾಯಾಲಯದ ಮುಂದಿರುವ ಆರೋಪಿ ಹಾಜರು ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸ್ಕೂಟರ್ ಮತ್ತು ಎಂ.ಒ.2 ನ್ನು ಅಮಾನತುಪಡಿಸಿಕೊಂಡ ಕಾಲಕ್ಕೆ ನಾನು ನಿಪಿ-9 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆಗ ಸಮಯ ಸ.4.15 ರಿಂದ

5.30 ಗಂಟೆ ಸಮಯವಾಗಿತ್ತು ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ಒಂದು ಫೋಟೋವನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**
**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.